ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಹನ್ನೆರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 3ನೇ ಫೆಬ್ರವರಿ, 2012

(ಸಮಯ: ಬೆಳಿಗ್ಗೆ 10.00 ಗಂಟೆಗೆ)

1. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) **ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ವಿಧೇಯಕ, 2011**
ಡಾ:ವಿ.ಎಸ್. ಆಚಾರ್ಯ, (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) ಅವರು:-

ಅ) ಕರ್ನಾಟಕ ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಇ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2) **ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ಎರಡನೇ ತಿದ್ದುಪಡಿ)ವಿಧೇಯಕ, 2011**
ಡಾ:ವಿ.ಎಸ್. ಆಚಾರ್ಯ, (ಉನ್ನತ ಶಿಕ್ಷಣ, ಯೋಜನೆ ಮತ್ತು ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) ಅವರು:-

ಅ) ಕರ್ನಾಟಕ ವಿಧಾನಪರಿಷತ್ತಿನಿಂದ ಪುನರ್ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪುನರ್ ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ

ಮು.ತಿ.ನೋ

3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2012ರ ಜನವರಿ 30ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಘನತೆವೆತ್ತ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ಶ್ರೀ ಡಿ.ಎನ್. ಜೀವರಾಜ್ ಅವರು ಸೂಚಿಸುವುದು.

ಶ್ರೀ ನೆಹರು ಓಲೇಕಾರ ಅವರು ಅನುಮೋದಿಸುವುದು.

4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎಸ್.ಸಂಪಂಗಿ ಅವರು ಡಾ: ನಂಜುಂಡಪ್ಪರವರ ವರದಿಯ ಪ್ರಕಾರ ಅತ್ಯಂತ ಹಿಂದುಳಿದ ಪ್ರದೇಶವೆಂದು ಪರಗಣಿಸಲ್ಪಟ್ಟಿರುವ ಬಾಗೇಪಲ್ಲಿ ಮತ್ತು ಗುಡಿಬಂಡೆ ಎರಡು ತಾಲ್ಲೂಕುಗಳಲ್ಲೂ 100 ಹಾಸಿಗೆಯುಳ್ಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು, ಈ ಕಟ್ಟಡದ ಕಾಮಗಾರಿ ಶೇ.80 ರಷ್ಟು ಮುಗಿದಿದ್ದರೂ ಅಗತ್ಯ ಸೌಲಭ್ಯ ಒದಗಿಸದೆ ರೋಗಿಗಳು ತೊಂದರೆಗೊಳಗಾಗಿದ್ದು, ರೋಗಿಗಳಿಗೆ ಮಧ್ಯಾಹ್ನದ ಊಟದ ವ್ಯವಸ್ಥೆಯು ಇಲ್ಲದೇ ಅನಾನುಕೂಲವಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

2. ಶ್ರೀ ಯು.ಟಿ.ಖಾದರ್ ಅವರು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇತ್ತೀಚೆಗೆ ಕೆಲವು ವ್ಯಕ್ತಿಗಳು ವಿನಾಕಾರಣ ಅಲ್ಪಸಂಖ್ಯಾತರನ್ನು ಗುರಿಯಾಗಿಸಿಕೊಂಡು ಪ್ರಚೋದನಕಾರಿ ಭಾಷಣದ ಮೂಲಕ ಸಮಾಜದಲ್ಲಿ ಅಶಾಂತಿಯನ್ನು ಉಂಟುಮಾಡುತ್ತಿರುವುದರ ಜೊತೆಗೆ ಕಾನೂನು – ಸುವ್ಯವಸ್ಥೆಗೆ ಭಂಗವಾಗುವ ರೀತಿಯಲ್ಲಿ ವರ್ತಿಸುತ್ತಿರುವ ಬಗ್ಗೆ ಮಾನ್ಯ ಗೃಹ ಮತ್ತು ಸಾರಿಗೆ ಸಚಿವರ ಗಮನ ಸೆಳೆಯುವುದು.

3. ಶ್ರೀ ಆರ್. ನರೇಂದ್ರ ಅವರು ದಿನಾಂಕ: 23.01.2012 ರಂದು ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕು ಬೋಳೇಗೌಡನ ದೊಡ್ಡಿ ಗ್ರಾಮದಲ್ಲಿ ಐದು ಜನ ಒಂದೇ ಕುಟುಂಬದ ಸದಸ್ಯರು ಕೃಷಿ ಸಾಲದಿಂದಾಗಿ ಬೇಸತ್ತು ಸಾಮೂಹಿಕವಾಗಿ ಆತ್ಮಹತ್ಯೆ ಮಾಡಿಕೊಂಡಿದ್ದು ಹಾಗೂ ಆ ಕುಟುಂಬದಲ್ಲಿ ಉಳಿದಿರುವ ಏಕೈಕ ಸದಸ್ಯನಾದ ಅವರ ಮಗನಿಗೆ ಸರ್ಕಾರದಿಂದ ಅವರ ಸಾಲ ತೀರಿಸಲು ಹಾಗೂ ಜೀವನಕ್ಕೆ ಪರಿಹಾರ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

4. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮೂರು ಮತ್ತು ನಾಲ್ಕನೇ ಹಂತದ ಕಟ್ಟಡ ಕಾಮಗಾರಿಗೆ 2009–10 ನೇ ಸಾಲಿನಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿದ್ದು ಈ ಕಾಮಗಾರಿಗೆ ಅನುದಾನ ಬಿಡುಗಡೆ ಮಾಡದಿರುವುದರಿಂದ ಹಾಗೂ ಎಂ.ಸಿ.ಐ. ನಿಯಮಾನುಸಾರ ಇಲ್ಲದಿರುವುದರಿಂದ ಮಾನ್ಯತೆ ರದ್ದಾಗುವ ಸಂಭವವಿರುವುದರ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

5. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಶ್ರೀ ಜಯಚಾಮರಾಜೇಂದ್ರ ಆಸ್ಪತ್ರೆಯನ್ನು 350 ಹಾಸಿಗೆಯಿಂದ 750 ಹಾಸಿಗೆಗೆ ಮೇಲ್ದರ್ಜೆಗೇರಿಸಿದ್ದು, ಪರಿಷ್ಕೃತ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅನುದಾನ ಬಿಡುಗಡೆ ಮಾಡದಿರುವುದರಿಂದ ಹಾಗೂ ಎಂ.ಸಿ.ಐ. ನಿಯಮಾನುಸಾರ ಇಲ್ಲದಿರುವುದರಿಂದ ಮಾನ್ಯತೆ ರದ್ದು ಮಾಡುವ ಸಂಭವವಿರುವುದರ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)